# ಸಾರಾಂಶ

**ಮಾನ್ಯ ಸಭಾಪತಿಯವರು:**

ವಿಧಾನ ಪರಿಷತ್ತಿನ 147ನೇ ಅಧಿವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:12.09.2022 ರಿಂದ 23.09.2022 ರವರೆಗೆ ಒಟ್ಟು 10 ದಿನಗಳು ಅಂದರೆ, **40.36** ಗಂಟೆ ನಡೆಸಲಾಗಿರುತ್ತದೆ.

ದಿನಾಂಕ:12.09.2022ರಂದು ಬೆಳಗ್ಗೆ 11.00 ಗಂಟೆಗೆ ಪ್ರಾರಂಭವಾಗಿ ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02, 03 ಹಾಗೂ 04ನೇ ಪಟ್ಟಿಗಳನ್ನು ಮಂಡಿಸಲಾಯಿತು.

ಇಂಗ್ಲೆಂಡಿನ ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆದ ಕಾಮನ್‌ವೆಲ್ತ್ ಕ್ರೀಡಾಕೂಟದಲ್ಲಿ ಭಾರತವು ಅತ್ಯುತ್ತಮ ಸಾಧನೆಯನ್ನು ಮಾಡಿದ್ದು, ಕ್ರೀಡಾಕೂಟದಲ್ಲಿ ಭಾಗವಹಿಸಿದ್ದ ಎಲ್ಲಾ ಕ್ರೀಡಾ ಪಟುಗಳಿಗೂ ದಿನಾಂಕ: 20.09.2022ರಂದು ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಪ್ರಕಾಶ್ ಕೆ. ರಾಥೋಡ್ ಅವರು ಮಂಡಿಸಿದ ಅಭಿನಂದನಾ ಪ್ರಸ್ತಾವಕ್ಕೆ ಸದನವು ಸಹಮತಿ ನೀಡಿರುತ್ತದೆ.

ಕರ್ನಾಟಕ ವಿಧಾನ ಮಂಡಲದ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಮಿತಿಯ 2020-21ನೇ ಸಾಲಿನ 3ನೇ ವರದಿಯನ್ನು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 36ನೇ ವರದಿಯನ್ನು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2021-22ನೇ ಸಾಲಿನ 5 ನೇ ವರದಿಯನ್ನು ಹಾಗೂ ವಿಧಾನ ಪರಿಷತ್ತಿನ ಹಕ್ಕುಬಾಧ್ಯತಾ ಸಮಿತಿಯ 99ನೇ ವರದಿಯನ್ನು ಮತ್ತು ರಾಜ್ಯದ ವಿವಿಧ ನಿಗಮಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳಲ್ಲಿ ನಡೆದಿರುವ ಅವ್ಯವಹಾರಗಳನ್ನು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಮಧ್ಯಂತರ ವರದಿಯನ್ನು ಮಂಡಿಸಲಾಯಿತು, ಹಾಗೂ ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವಿಶೇಷ ವರದಿಯನ್ನು ಸಭಾನಾಯಕರು ಸದನದಲ್ಲಿ ಮಂಡಿಸಿದರು.

ರಾಜ್ಯದಲ್ಲಿರುವ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಕ್ಲಬ್‌ಗಳ ಕಾರ್ಯವೈಖರಿ ಮತ್ತು ಚಟುವಟಿಕೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಕಾಲಾವಕಾಶವನ್ನು ಮುಂದಿನ 6 ತಿಂಗಳಿಗೆ ವಿಸ್ತರಿಸುವ ಹಾಗೂ ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ಬಿಡುಗಡೆಯಾದ ಹಣ ಬಳಕೆಯಾಗದಿರುವ ಬಗ್ಗೆ ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯು ತನ್ನ ವರದಿ ಸಲ್ಲಿಸಲು ಸದನದ ಸಹಮತಿ ಕಾಯ್ದಿರಿಸಿ ಮುಂದಿನ 6 ತಿಂಗಳವರೆಗೆ ವಿಸ್ತರಿಸಲಾಗಿದ್ದ ಪ್ರಸ್ತಾವವನ್ನು ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ಹಾಗೂ ಕರ್ನಾಟಕ ರಾಜ್ಯ ಅಂಗವಿಕಲರ ಸಮನ್ವಯ ಸಮಿತಿಗೆ ಚುನಾವಣೆ ನಡೆಸುವ ಬದಲು ಮಾನ್ಯ ಸದಸ್ಯರನ್ನು ನಾಮನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಪ್ರಸ್ತಾವನೆಯನ್ನು ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ಭಾರತ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಕರ್ನಾಟಕ ರಾಜ್ಯ ನೇರ ನಗದು ವರ್ಗಾವಣೆ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿ (2022ನೇ ವರ್ಷದ ವರದಿ ಸಂಖ್ಯೆ–2), ಸಮಗ್ರ ಹಣಕಾಸು ನಿರ್ವಹಣಾ ವ್ಯವಸ್ಥೆ ಖಜಾನೆ–II ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ (2021ನೇ ವರ್ಷದ ವರದಿ ಸಂಖ್ಯೆ–4)ವರದಿ, ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ 31ನೇ ಮಾರ್ಚ್, 2020ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು ನೀಡಿರುವ ಅನುಪಾಲನಾ ಲೆಕ್ಕಪರಿಶೋಧನಾ (2022ನೇ ವರ್ಷದ ವರದಿ ಸಂಖ್ಯೆ–3) ವರದಿ, ಕರ್ನಾಟಕದಲ್ಲಿ ನಗರ ಪ್ರದೇಶದ ಬಡವರಿಗೆ ವಸತಿ ಯೋಜನೆಗಳ ಅನುಷ್ಠಾನದ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ (2022ನೇ ವರ್ಷದ ವರದಿ ಸಂಖ್ಯೆ–4) ವರದಿ, ದೀನದಯಾಳ್ ಉಪಾಧ್ಯಾಯ ಗ್ರಾಮ ಜ್ಯೋತಿ ಯೋಜನೆ (DDUGJY)/ಪ್ರಧಾನ ಮಂತ್ರಿ ಸಹಜ್ ಬಿಜಲಿ ಹರ್ ಘರ್ ಯೋಜನೆಯ (ಸೌಭಾಗ್ಯ) ಅನುಷ್ಠಾನದ ಮೇಲಿನ ಲೆಕ್ಕಪರಿಶೋಧನಾ (2022ನೇ ವರ್ಷದ ವರದಿ ಸಂಖ್ಯೆ–5) ವರದಿ ಹಾಗೂ 2022–23ನೇ ಸಾಲಿನ ಪೂರಕ ಅಂದಾಜುಗಳ (ಒಂದನೇ ಕಂತು) ವರದಿಯನ್ನು ಮಂಡಿಸಲಾಯಿತು.

ಮಾನ್ಯ ಶಾಸಕರುಗಳಾದ ಶ್ರೀ ಎಸ್.ಎಲ್. ಭೋಜೇಗೌಡ ಅವರನ್ನು ವಿಧಾನ ಪರಿಷತ್ತಿನಲ್ಲಿ ಜನತಾದಳ (ಜಾತ್ಯತೀತ) ಶಾಸಕಾಂಗ ಪಕ್ಷದ ನಾಯಕರನ್ನಾಗಿ ಹಾಗೂ ಶ್ರೀ ಶರವಣ ಟಿ.ಎ. ಅವರನ್ನು ಉಪ ನಾಯಕರನ್ನಾಗಿ ಮಾನ್ಯತೆ ಮಾಡಿರುವ ಕುರಿತು ಸದನದಲ್ಲಿ ಪ್ರಕಟಿಸಲಾಯಿತು.

---3

ಪ್ರಸ್ತುತ ಅಧಿವೇಶನದಲ್ಲಿ **1217** ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ **150** ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ **134** ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ **16** ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು **1067** ಪ್ರಶ್ನೆಗಳ ಪೈಕಿ **478** ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು **06** ಸೂಚನೆಗಳನ್ನು ಸ್ವೀಕರಿಸಲಾಗಿರುತ್ತದೆ.

ನಿಯಮ 72ರಡಿಯಲ್ಲಿ **127** ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ **06** ಸೂಚನೆಗಳಿಗೆ ಉತ್ತರಿಸಲಾಯಿತು ಹಾಗೂ **48** ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ **75** ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ **06** ಸೂಚನೆಗಳಿಗೆ ಉತ್ತರಿಸಲಾಯಿತು ಹಾಗೂ **21** ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಶೂನ್ಯ ವೇಳೆಯ ಒಟ್ಟು **65** ಸೂಚನೆಗಳ ಪೈಕಿ **12** ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಗಿದ್ದು, **29** ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ನಿಯಮ **59**ರ ಅಡಿಯಲ್ಲಿ **06** ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಎರಡು ಸೂಚನೆಗಳನ್ನು ಒಂದುಗೂಡಿಸಿ ಒಂದು ಸೂಚನೆಯನ್ನ ನಿಯಮ 68ಕ್ಕೆ ಪರಿವರ್ತಿಸಿ ಚರ್ಚಿಸಿ ಉತ್ತರಿಸಲಾಯಿತು. ನಿಯಮ 330ಕ್ಕೆ **02** ಸೂಚನೆಗಳನ್ನು ಪರವರ್ತಿಸಲಾಯಿತು ಹಾಗೂ **02** ಸೂಚನೆಗಳನ್ನು ತಿರಸ್ಕರಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತರೂಪದಲ್ಲಿರುವ ಒಟ್ಟು 14 ವಿಧೇಯಕಗಳಲ್ಲಿ **13** ವಿಧೇಯಕಗಳನ್ನು ಹಾಗೂ ವಿಧಾನ ಪರಿಷತ್ತಿನಲ್ಲಿ ಬಾಕಿಯಿದ್ದ **01** ವಿಧೇಯಕವನ್ನು ತಿದ್ದುಪಡಿಗಳೊಂದಿಗೆ ಅಂಗೀಕರಿಸಿ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

**ಮಾನ್ಯ ಸಭಾನಾಯಕರು ಹಾಗೂ ವಿರೋಧ ಪಕ್ಷದ ನಾಯಕರು ಮಾತನಾಡಿದ ನಂತರ:–**

---4

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ವಿರೋಧ ಪಕ್ಷದ ಮುಖ್ಯ ಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, **ಸದನವನ್ನು ಅನಿರ್ದಿಷ್ಟಕಾಲದವರೆಗೆ ಮುಂದೂಡುತ್ತಿದ್ದೇನೆ**.

* * * * *